**ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಓದುತ್ತಿರುವ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳು ಶುಲ್ಕ ಮರುಪಾವತಿ ಕುರಿತು**

968 - ಶ್ರೀ ಗುರುಸ್ವಾಮಿ ಎ.ಎಸ್. (ಚಾಮುಂಡೇಶ್ವರಿ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಕರ್ನಾಟಕ ರಾಜ್ಯದ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಓದುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು?*

ಆ) *ಶುಲ್ಕ ಮರುಪಾವತಿಗಾಗಿ ತಾಂತ್ರಿಕ ಶಿಕ್ಷಣ ಇಲಾಖೆಗೆ ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು?*

ಇ) *ವಿದ್ಯಾರ್ಥಿಗಳಿಗೆಲ್ಲಾ ಈ ಸೌಲಭ್ಯವನ್ನು ಕಲ್ಪಿಸಲಾಗಿದೆಯೇ?*

ಈ) *ಒಂದು ವರ್ಷಕ್ಕೆ ಈ ಉದ್ದೇಶಕ್ಕಾಗಿ ಬಜೆಟ್‌ನಲ್ಲಿ ಮೀಸಲಿಡಲಾದ ಮೊತ್ತ ಎಷ್ಟು?*

ಉ) *ಬಜೆಟ್‌ನಲ್ಲಿ ಹೆಚ್ಚು ಹಣವನ್ನು ಮೀಸಲಿಟ್ಟು ಎಲ್ಲಾ ವಿದ್ಯಾರ್ಥಿಗಳಿಗೆ ಈ ಸೌಲಭ್ಯವನ್ನು ಒದಗಿಸಲಾಗುವುದೆ?*

ಡಾ॥ ಜಿ. ಪರಮೇಶ್ವರ (ಉನ್ನತ ಶಿಕ್ಷಣ ಸಚಿವರು) :

ಅ) ಕರ್ನಾಟಕ ರಾಜ್ಯದಲ್ಲಿ 1998-99ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ 4496 ಪರಿಶಿಷ್ಟ ಜಾತಿ ಹಾಗೂ 986 ಪರಿಶಿಷ್ಟ ಪಂಗಡಕ್ಕೆ ಸೇರಿದ ವಿದ್ಯಾರ್ಥಿಗಳು ಇಂಜಿನಿಯರಿಂಗ್ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿದ್ದರು.

ಆ) 1999-2000ನೇ ಸಾಲಿನಲ್ಲಿ ಒಟ್ಟು 76 ಇಂಜಿನಿಯರಿಂಗ್ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ 1460 ವಿದ್ಯಾರ್ಥಿಗಳು ಶುಲ್ಕ ಮರುಪಾವತಿಗಾಗಿ ಅರ್ಜಿ ಸಲ್ಲಿಸಿರುತ್ತಾರೆ.

ಇ) ಅನುದಾನದ ಕೊರತೆಯಿಂದಾಗಿ ಎಲ್ಲಾ ವಿದ್ಯಾರ್ಥಿಗಳಿಗೂ ಈ ಸೌಲಭ್ಯವನ್ನು ಕಲ್ಪಿಸಲು ಸಾಧ್ಯವಾಗುತ್ತಿಲ್ಲ.

ಈ) 1999-2000ನೇ ಸಾಲಿನಲ್ಲಿ ರೂ. 15.89 ಲಕ್ಷ ಬಜೆಟ್ ನಿಗಧಿಗೊಳಿಸಲಾಗಿತ್ತು.

ಉ) ಸಾಕಷ್ಟು ಅನುದಾನವನ್ನು ಒದಗಿಸುವ ಬಗ್ಗೆ ಪರಿಶೀಲಿಸಲಾಗುವುದು.

**ಇಂಜಿನಿಯರಿಂಗ್ ಕಾಲೇಜಿನ ಶಿಕ್ಷಕರ ವೇತನ ಪರಿಷ್ಕರಣೆ**

969 - ಶ್ರೀ ಎ.ಎಸ್. ಗುರುಸ್ವಾಮಿ (ಚಾಮುಂಡೇಶ್ವರಿ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಇಂಜಿನಿಯರಿಂಗ್ ಕಾಲೇಜಿನ ಶಿಕ್ಷಕರು ಪರೀಕ್ಷೆಗಳನ್ನು ಬಹಿಷ್ಕರಿಸಿ ಮುಷ್ಕರ ಹೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಅ) ಹಾಗದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?

ಇ) ಖಾಸಗಿ ಇಂಜಿನಿಯರಿಂಗ್ ಕಾಲೇಜಿನ ಶಿಕ್ಷಕರಿಗೆ ಪರಿಷ್ಕೃತ ವೇತನವನ್ನು ಎ.ಐ.ಸಿ.ಟಿ.ಇ. ಶಿಫಾರಸ್ಸಿನಂತೆ ಮಂಜೂರು ಮಾಡಲು ಸರ್ಕಾರಕ್ಕೆ ಇರುವ ತೊಂದರೆಗಳೇನು?

ಡಾ॥ ಜಿ. ಪರಮೇಶ್ವರ (ಉನ್ನತ ಶಿಕ್ಷಣ ಸಚಿವರು) :

ಅ) ಹೌದು.

ಆ) ಸರ್ಕಾರವು ಮುಷ್ಕರದ ಬಗ್ಗೆ ಶಿಕ್ಷಕರು ಹಾಗೂ ವಿವಿಧ ಸಂಘ ಸಂಸ್ಥೆಗಳೊಂದಿಗೆ ಸಮಾಲೋಚಿಸಿ, ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಗೆ ಧಕ್ಕೆಯಾಗದಂತೆ ಪರೀಕ್ಷೆಗಳನ್ನು ನಡೆಸಲು ಪರ್ಯಾಯ ವ್ಯವಸ್ಥೆಗಳನ್ನು ಮಾಡಿ ಪರೀಕ್ಷೆಯನ್ನು ಸುಗಮವಾಗಿ ನಡೆಯುವಂತೆ ವ್ಯವಸ್ಥೆ ಮಾಡಲಾಗಿತ್ತು.

ಇ) ಖಾಸಗಿ ಇಂಜನಿಯರಿಂಗ್ ಕಾಲೇಜುಗಳಲ್ಲಿನ ಶಿಕ್ಷಕರುಗಳು ಆಡಳಿತ ಮಂಡಳಿಗಳ ಸಿಬ್ಬಂದಿಗಳಾಗಿದ್ದು, ಇಂತಹ ಸಿಬ್ಬಂದಿಗಳು ಸರ್ಕಾರದ ನೇರ ಆಡಳಿತಕ್ಕೆ ಒಳಪಡದೇ ಇರುವುದರಿಂದ ಸದರಿಯವರಿಗೆ ರಾಜ್ಯ ಸರ್ಕಾರವು ಎಐಸಿಟಿಇ ವೇತನವನ್ನು ಮಂಜೂರು ಮಾಡಲು ಸಾಧ್ಯವಿಲ್ಲ.

## ಹೊಸ ವೈದ್ಯಕೀಯ ಶಿಕ್ಷಣ ಕೋರ್ಸ್ ಕುರಿತು

971 - ಶ್ರೀ ಎ.ಎಸ್. ಗುರುಸ್ವಾಮಿ (ಚಾಮುಂಡೇಶ್ವರಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸ್ನಾತಕೋತರ ಹಂತದಲ್ಲಿ ಎಷ್ಟು ಹೊಸ ವೈದ್ಯಕೀಯ ಶಿಕ್ಷಣ ಕೋರ್ಸುಗಳನ್ನು ಪ್ರಾರಂಭಿಸಲು ಉದ್ದೇಶಿಸಲಾಗಿದೆ?

ಆ) ಇವು ಅಖಿಲ ಭಾರತೀಯ ವೈದ್ಯಕೀಯ ಶಿಕ್ಷಣ ಮಂಡಲಿಯಿಂದ ಅಂಗೀಕೃತವಾಗಿದೆಯೇ?

ಇ) ಹಾಗಿಲ್ಲದಿದ್ದಲ್ಲಿ ಅದಕ್ಕೆ ಕಾರಣಗಳೇನು?

ಈ) ಗ್ರಾಮೀಣ ಜನತೆಯ ಅವಶ್ಯಕತೆಗಳನ್ನು ಪೂರೈಸಲು ವೈದ್ಯಕೀಯ ಪದ್ಧತಿ ಕೋರ್ಸುಗಳನ್ನು ಬೋಧಿಸಲು ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆಯೇ?

ಉ) ವೈದ್ಯಕೀಯ ಶಾಲೆಗಳನ್ನು ತೆಗೆಯಲು ಸಾಕಷ್ಟು ಪೂರಕ ಸೌಲಭ್ಯಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಊ) ಬಿಎಸ್ಸ್ಸಿ ಇನ್ ಲ್ಯಾಬ್ ಟೆಕ್ನಿಶಿಯನ್ ಕೋರ್ಸು ನಂತಹವುಗಳನ್ನು ಪ್ರತಿಷ್ಠಿತ ಶಾರದಾ ವಿಲಾಸ್ ಕಾಲೇಜಿನಂತಹ ಸಂಸ್ಥೆಗಳಲ್ಲಿ ತಡೆಹಿಡಿಯಲು ಸರ್ಕಾರವು ಯಾವ ಹಿನ್ನೆಲೆಯಲ್ಲಿ ಕ್ರಮ ಕೈಗೊಂಡಿದೆ. ಇದಕ್ಕೆ ಪೂರಕವಾಗಿ ಇಲ್ಲವೇ ಬದಲಾಗಿ ಎಲ್ಲಿ ಯಾವ ಕೋರ್ಸುಗಳನ್ನು ಪ್ರಾರಂಭಿಸಲಾಗಿದೆ?